# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 395 (504) |
| ಸದಸ್ಯರ ಹೆಸರು | : | ಶ್ರೀ ಪ್ರಕಾಶ್ ಬಾಬಣ್ಣ ಹುಕ್ಕೇರಿ (ಶಿಕ್ಷಕರ ಕ್ಷೇತ್ರ). |
| ಉತ್ತರಿಸುವ ದಿನಾಂಕ | : | 10.07.2023 |
| ಉತ್ತರಿಸುವ ಸಚಿವರು | : | ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು. |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದ ಅನುದಾನಿತ ಶಾಲಾ ಕಾಲೇಜುಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಶಿಕ್ಷಕರ ಹೊಸ ಪಿಂಚಣಿ ಅಥವಾ ಹಳೆಯ ಪಿಂಚಣಿ ಯೋಜನಾ ವ್ಯವಸ್ಥೆಯೂ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ | ಬಂದಿದೆ |
| (ಇ) | ಅನುದಾನಿತ ಶಾಲಾ ಕಾಲೇಜುಗಳ ಶಿಕ್ಷಕರಿಗೆ ಹೊಸ ಅಥವಾ ಹಳೆಯ ನಿಶ್ಚಿತ ಪಿಂಚಣಿ ಯೋಜನೆಯನ್ನು ಜಾರಿ ಮಾಡುವ ಪ್ರಸ್ತಾಪ ಸರ್ಕಾರದ ಮುಂದಿದೆಯೇ; | ದಿನಾಂಕ: 01.04.2006ರ ನಂತರ ನೇಮಕಾತಿ ಹೊಂದಿದ ಸಿಬ್ಬಂದಿಗಳಿಗೆ ಕಡ್ಡಾಯವಾಗಿ ಸರ್ಕಾರದ ಆದೇಶ ಸಂಖ್ಯೆ: FD(SPL)04 PET 2005 ದಿನಾಂಕ: 01.04.2006ರನ್ವಯ ನೂತನ ಪಿಂಚಣಿ ಯೋಜನೆ ಅನ್ವಯವಾಗುತ್ತದೆ. ಸರ್ಕಾರದ ಆದೇಶ ಸಂಖ್ಯೆ: :ಆಇ 34 ಪಿಇಎನ್ 2018 ದಿನಾಂಕ; 23.06.2018ರಲ್ಲಿ ಅಂಶದಾಯಿ ಪಿಂಚಣಿ ಕೊಡುಗೆ ಯೋಜನಯಡಿ ಬರುವ ಸರ್ಕಾರಿ ನೌಕರರಿಗೆ ನಿವೃತ್ತಿ ಉಪದಾನ, ಮರಣ ಮತ್ತು ಕುಟುಂಬ ಪಿಂಚಣಿಯನ್ನು ವಿಸ್ತರಿಸಲಾಗಿದೆ.<br><br>**ಅನುದಾನಿತ ಶಿಕ್ಷಣ ಸಂಸ್ಥೆಗಳ ಸಿಬ್ಬಂದಿಗಳಿಗೆ :**<br><br>ದಿನಾಂಕ:01.4.2006ರ ಪಿಂಚಣಿ ನೀತಿಯಲ್ಲಿ ಅನುದಾನಿತ ಶಾಲೆಗಳ ನೌಕರರಿಗೆ ಪಿಂಚಣಿ ಒದಗಿಸುವ ಕುರಿತು ಮೇಲ್ಕಂಡ ಸರ್ಕಾರದ ಆದೇಶದ ಕ್ರಮ ಸಂಖ್ಯೆ: 8ರಲ್ಲಿ ಈ ಕೆಳಗಿನಂತೆ ಆದೇಶಿಸಿದೆ.<br>...(8) ಸಹಾಯಾನುದಾನದ ಶಿಕ್ಷಣ ಸಂಸ್ಥೆಗಳ ನೌಕರರಿಗೆ, ಗೊತ್ತು ಮಾಡಿದ ಪ್ರಯೋಜನ ಪಿಂಚಣಿಯನ್ನು ದಿನಾಂಕ: 01.04.2006ರಂದು ಅಥವಾ ಅದರ ತರುವಾಯ ಸೇರುವ ಹೊಸದಾಗಿ ನೇಮಕಗೊಂಡ ಸಿಬ್ಬಂದಿಗೆ ನಿಲ್ಲಿಸಿಬಿಡತಕ್ಕದ್ದು. ನೂತನ ನಿಗಧಿತ ವಂತಿಗೆ ಪಿಂಚಣಿ ಯೋಜನೆಯು, ಆಯ್ಕೆಯ ಅವಕಾಶದ ಆಧಾರದ ಮೇಲೆ ನೌಕರನಿಗೆ ಮತ್ತು ನಿಯೋಜಕನಿಗೆ ಅನ್ವಯವಾಗತಕ್ಕದ್ದು ಮತ್ತು |
| (ಈ) | ಯಾವುದಾದರೊಂದು ಪಿಂಚಣಿ ಯೋಜನೆಯನ್ನು ಜಾರಿ ಮಾಡಲು ನಿರ್ಧಾರ ಕೈಗೊಂಡಲ್ಲಿ ಯಾವ ಪಿಂಚಣಿ ವ್ಯವಸ್ಥೆಯನ್ನು ಯಾವ ಕಾಲಮಿತಿಯಲ್ಲಿ ಜಾರಿಗೆ ತರಲಾಗುವುದು? (ಸಂಪೂರ್ಣ ವಿವರ ನೀಡುವುದು) | |

| | | |
|---|---|---|
| | | ಆಯ್ಕೆಯ ಅವಕಾಶವನ್ನು ಇಬ್ಬರಿಂದಲೂ ಚಲಾಯಿಸತಕ್ಕದ್ದು, ಆದರೆ ನಿಯೋಜಕರ ವಂತಿಗೆಯನ್ನು ಸಂಬಂಧಪಟ್ಟ ಸಂಸ್ಥೆಗಳು ಭರಿಸತಕ್ಕದ್ದು. ಆದರೆ ರಾಜ್ಯ ಸರ್ಕಾರವಲ್ಲ.<br>• ಈ ಆದೇಶವು ದಿನಾಂಕ: 01.04.2006ರಿಂದ ಜಾರಿಗೆ ಬಂದಿರುತ್ತದೆ.<br>• ದಿನಾಂಕ:01.04.2006ರ ನಂತರ ಅನುದಾನ ಸಹಿತ ಅನುಮೋದನೆಗೊಂಡ ಅನುದಾನಿತ ಖಾಸಗಿ ಶಾಲೆ/ಕಾಲೇಜುಗಳಲ್ಲಿನ ಸಿಬ್ಬಂದಿಗಳಿಗೆ ಈ ಮೇಲಿನ ನಿಯಮ ಅನ್ವಯವಾಗುತ್ತದೆ.<br>• ಅನುದಾನಿತ ಸಿಬ್ಬಂದಿಗಳ ಸೇವಾ ಸೌಲಭ್ಯಗಳು ಅನುದಾನಸಹಿತವಾಗಿ ಅನುಮೋದನೆಗೊಂಡ ದಿನಾಂಕದಿಂದ ಅನ್ವಯವಾಗುತ್ತದೆ. ಆದುದರಿಂದ, 2006ರ ಪೂರ್ವದಲ್ಲಿ ಅನುದಾನರಹಿತವಾಗಿ ನೇಮಕಗೊಂಡ ಸಿಬ್ಬಂದಿಗಳು ದಿನಾಂಕ: 01.04.2006ರ ನಂತರ ಅನುದಾನಕ್ಕೆ ಒಳಪಟ್ಟಲ್ಲಿ ಅಂತಹ ಸಿಬ್ಬಂದಿಗಳು ಹೊಸ ಪಿಂಚಣಿ ಯೋಜನೆ(NPS) ವ್ಯಾಪ್ತಿಗೆ ಒಳಪಡುತ್ತಾರೆ.<br><br>ಈ ಪಿಂಚಣಿ ಯೋಜನೆಯು ಸಂಪೂರ್ಣವಾಗಿ ಸ್ವ-ಇಚ್ಛಾ (Optional) ನೆಲೆಯಲ್ಲಿ ಜಾರಿಗೊಳಿಸುವುದರಿಂದ ಕಡ್ಡಾಯಗೊಳಿಸಲು ಅವಕಾಶವಿರುವುದಿಲ್ಲ. |

ಸಂಖ್ಯೆ: ಇಪಿ 274 ಎಸ್‌ಇಎಸ್ 2023

(ಎಸ್.ಮಧುಬಂಗಾರಪ್ಪ)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು